# Bangalore
# Regional News
# 20.07.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಪ್ರವಾಹ ಪರಿಸ್ಥಿತಿ ನಿಯಂತ್ರಣ, ಪರಿಹಾರ ಕಾರ್ಯಕ್ಕಾಗಿ ೭೭೫ ಕೋಟಿ ರೂಪಾಯಿ ನಿಗದಿ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ವ್ಯಾಪಕ ಮಳೆಯಿಂದಾಗಿ ೨-೩ ದಿನಗಳಲ್ಲಿ ಕೆಆರ್‌ಎಸ್ ಅಣೆಕಟ್ಟೆ ಭರ್ತಿ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ಉತ್ತರಕನ್ನಡದ ಗುಡ್ಡಕುಸಿತ ದುರಂತ ಸ್ಥಳಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಭೇಟಿ, ಪರಿಶೀಲನೆ

೪. ಯುವ ಅಧಿಕಾರಿಗಳು ಆಧುನಿಕ ತಂತ್ರಜ್ಞಾನ ಅಳವಡಿಕೆಗೆ ಮುಂದಾಗಬೇಕು - ಸಚಿವ ಕೃಷ್ಣ ಬೈರೇಗೌಡ

<><*<><>*><>

ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಉತ್ತಮ ಶಿಕ್ಷಣಕ್ಕೆ ಗುಣಮಟ್ಟದ ಆಹಾರ ನೀಡುವುದು ಅತ್ಯಂತ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸರ್ಕಾರ ಹಾಗೂ ಅಜೀಂಪ್ರೇಮ್ ಜಿ ಫೌಂಡೇಷನ್ ಸಹಭಾಗಿತ್ವದಲ್ಲಿ ಸರ್ಕಾರಿ, ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ವಾರದಲ್ಲಿ ಉಚಿತವಾಗಿ ೬ ದಿನಗಳ ಕಾಲ ೧ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಪೂರಕ ಪೌಷ್ಠಿಕ ಆಹಾರ ನೀಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲಾ ಮಕ್ಕಳಿಗೆ ಅಜೀಂ ಪ್ರೇಮ್ ಜಿ ಫೌಂಡೇಷನ್‌ನಿಂದ ವಾರದಲ್ಲಿ ನಾಲ್ಕು ದಿನವೂ ಮೊಟ್ಟೆ ನೀಡಲು ಮತ್ತು ಪೂರಕ ಪೌಷ್ಠಿಕ ಆಹಾರ ಒದಗಿಸುವ ಪುಣ್ಯದ ಕಾರ್ಯಕ್ಕೆ ಸರ್ಕಾರದ ಜೊತೆಗೆ ಕೈಜೋಡಿಸಿದ್ದಾರೆ. ವೈಜ್ಞಾನಿಕವಾಗಿ, ವೈಚಾರಿಕವಾಗಿ ವಿದ್ಯಾರ್ಥಿಗಳು ವಿಕಾಸ ಹೊಂದಿದಾಗ ಮಾತ್ರ ಸಮಾಜಮುಖಿಯಾಗಲು ಸಾಧ್ಯ ಎಂದು ಹೇಳಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ ವ್ಯಾಪಕ ಮಳೆಯಿಂದಾಗಿ ಉಂಟಾಗಿರುವ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪರಿಹಾರ ಕಾರ್ಯ ಚುರುಕುಗೊಳಿಸುವಂತೆ ಸೂಚಿಸಿದ್ದು, ಉತ್ತರಕನ್ನಡ ಜಿಲ್ಲೆಯ ಅಂಕೋಲಾದಲ್ಲಿ ಗುಡ್ಡ ಕುಸಿತದಿಂದ ಉಂಟಾಗಿರುವ ಹಾನಿ ಪರಿಶೀಲಿಸಲು ನಾಳೆ ಅಂಕೋಲಾಗೆ ಭೇಟಿ ನೀಡುವುದಾಗಿ ತಿಳಿಸಿದರು. ಪ್ರವಾಹ ಸಂತ್ರಸ್ತ ಪ್ರದೇಶಗಳ ಜನರ ಪುನರ್‌ವಸತಿ ಹಾಗೂ ಪರಿಹಾರ ಕಾರ್ಯಗಳಿಗೆ ರಾಜ್ಯ ಸರ್ಕಾರ ೭೭೫ ಕೋಟಿ ರೂಪಾಯಿ ಹಣ ನೀಡಿದ್ದು, ಅಗತ್ಯವಿದ್ದಲ್ಲಿ ಮತ್ತಷ್ಟು ನೆರವು ಒದಗಿಸಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು.

<><*<><>*><>

ಮಂಡ್ಯ ಜಿಲ್ಲೆಯ ಜೀವನಾಡಿ ಕೆ.ಆರ್.ಎಸ್ ಅಣೆಕಟ್ಟು ಭರ್ತಿಯ ಸನಿಹಕ್ಕೆ ಬಂದಿದ್ದು, ೧೨೦ ಅಡಿ ದಾಟಿದೆ. ಅಣೆಕಟ್ಟೆ ತುಂಬಲು ಇನ್ನು ಕೇವಲ ನಾಲ್ಕು ಅಡಿ ಬಾಕಿ ಇದೆ. ಕಳೆದ ಒಂದು ವಾರದಲ್ಲಿ ೧೫ ಟಿಎಂಸಿಗೂ ಹೆಚ್ಚು ನೀರು ಜಲಾಶಯಕ್ಕೆ ಹರಿದು ಬಂದಿದೆ. ಇಂದು ೫೧ ಸಾವಿರದ ೩೭೫ ಕ್ಯೂಸೆಕ್ ಒಳಹರಿವಿದ್ದು, ೪ ಸಾವಿರದ ೭೧೪ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಕಾವೇರಿ ನದಿ ಪಾತ್ರದಲ್ಲಿ ವ್ಯಾಪಕ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೃಷ್ಣರಾಜ ಸಾಗರ ಅಣೆಕಟ್ಟೆಯಲ್ಲಿ ಈ ಬಾರಿ ಹೆಚ್ಚಿನ ನೀರು ಸಂಗ್ರಹವಾಗಿದೆ. ಈಗಾಗಲೇ ಒಂದು ಸಾವಿರ ಕ್ಯೂಸೆಕ್ ನೀರನ್ನು ಅಣೆಕಟ್ಟೆಯಿಂದ ನದಿಗೆ ಹರಿಸಲಾಗುತ್ತಿದೆ. ಅಣೆಕಟ್ಟೆ ಭರ್ತಿಯಾದ ಮೇಲೆ ಇನ್ನೂ ಹೆಚ್ಚಿನ ನೀರನ್ನು ನದಿಗೆ ಬಿಡಲಿದ್ದು, ಕಾವೇರಿ ನದಿ ಸನಿಹದ ಪ್ರವಾಸಿ ತಾಣಗಳು ಮತ್ತು ಗ್ರಾಮಗಳಲ್ಲಿ ನದಿಗೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಲಾಗಿದೆ. ರಂಗನತಿಟ್ಟು ಪಕ್ಷಿಧಾಮದಲ್ಲೂ ನೀರು ಭೋರ್ಗರೆಯುತ್ತಿದೆ. ಹೆಚ್ಚಿನ ಅನಾಹುತ ತಪ್ಪಿಸಲು ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಕ್ ತನ್ವೀರ್ ಆಸೀಫ್ ತಿಳಿಸಿದ್ದಾರೆ. ಈ ಮಧ್ಯೆ ಕಬಿನಿ ಜಲಾಶಯ ಬಹುತೇಕ ಭರ್ತಿಯಾಗಿದೆ. ೧೯.೫೨ ಟಿಎಂಸಿ ಸಾಮರ್ಥ್ಯದ ಜಲಾಶಯದಲ್ಲಿ ಪ್ರಸ್ತುತ ೧೭.೪೧ ಟಿಎಂಸಿ ನೀರು ಸಂಗ್ರಹವಾಗಿದೆ. ೪೫ ಸಾವಿರದ ೬೫೮ ಕ್ಯೂಸೆಕ್ ಒಳಹರಿವಿದ್ದು, ೪ ಸಾವಿರದ ೫೭೪

ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ತುಂಗಭದ್ರಾ ಜಲಾಶಯಕ್ಕೆ ೧ ಲಕ್ಷದ ೭ ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದ್ದು. ಜಲಾಶಯದ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿದೆ. ಯಾವುದೇ ಸಂದರ್ಭದಲ್ಲಿ ಜಲಾಶಯ ಭರ್ತಿಯಾಗುವ ಸಂಭವವಿದೆ. ಹೀಗಾಗಿ ನದಿಗೆ ನೀರು ಹರಿಸುವ ಸಾಧ್ಯತೆ ಇದ್ದು, ನದಿ ತೀರದ ಜನತೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ತುಂಗಭದ್ರಾ ಮಂಡಳಿ ಮನವಿ ಮಾಡಿದೆ.  ಬಳ್ಳಾರಿ, ವಿಜಯನಗರ, ಕೊಪ್ಪಳ ಮತ್ತು ರಾಯಚೂರು ಜಿಲ್ಲಾಡಳಿತ ನದಿ ತೀರದ ಜನತೆಗೆ ಎಚ್ಚರಿಕೆ ನೀಡಿದೆ. ಜಲಾಶಯದ ಗರಿಷ್ಟ ಮಟ್ಟ ೧ ಸಾವಿರದ ೬೩೩ ಅಡಿ ಇದ್ದು. ಇಂದಿನ ಮಟ್ಟ ೧ ಸಾವಿರದ ೬೨೧.೩೨ ಅಡಿಗೆ ತಲುಪಿದೆ. ಜಲಾಶಯದಲ್ಲಿ ೬೫ ಟಿಎಂಸಿ ನೀರು ಸಂಗ್ರಹವಾಗಿದೆ. ತುಂಗಭದ್ರಾ ಬಲದಂಡೆ ಕೆಳ ಮಟ್ಟದ ಹಾಗೂ ಎಡದಂಡೆಯ ಮುಖ್ಯ ಮತ್ತು ಕೆಳಮಟ್ಟದ ಕಾಲುವೆಗಳಿಗೆ  ಕೃಷಿಗಾಗಿ ೧ ಸಾವಿರದ ೫೦೦  ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದೆ. ಕರ್ನಾಟಕ, ಆಂದ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ೧೨ ಲಕ್ಷ ಎಕರೆಗೂ ಹೆಚ್ಚು ಜಮೀನಿಗೆ ಈ ಜಲಾಶಯದಿಂದ ನೀರು ಒದಗಿಸಲಾಗುತ್ತಿದೆ. ಈ ಮಧ್ಯೆ ದಾವಣಗೆರೆ ಜಿಲ್ಲೆಯಾದ್ಯಂತ ಮಳೆ ಮುಂದುವರೆದಿದ್ದು, ೨೩ ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ತುಂಗಭದ್ರಾ ನದಿಯಲ್ಲಿ ಪ್ರವಾಹ ಪರಿಸ್ಥಿತಿ ತಲೆದೂರಿದ್ದು, ನದಿ ಪಾತ್ರದ ೪೩ ಸಮಸ್ಯಾತ್ಮಕ ಗ್ರಾಮಗಳ ಜನತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಂದು ಮಳೆ ಪ್ರಮಾಣ ಕಡಿಮೆಯಾಗಿದ್ದು, ನಿನ್ನೆ ಸುರಿದ ಧಾರಾಕಾರ ಮಳೆಯಿಂದಾಗಿ ಕಳಸ ತಾಲೂಕಿನ ಮಕ್ಕಿಮನೆ ಗ್ರಾಮದಲ್ಲಿ ಭೂಕುಸಿತ ಉಂಟಾಗಿದೆ. ಕೊಪ್ಪ ತಾಲೂಕಿನ ಮೇಗೂರು ಗ್ರಾಮದಲ್ಲೂ ಭೂಮಿ ಕುಸಿತವಾಗಿರುವುದಾಗಿ ವರದಿಯಾಗಿದೆ. ಮಳೆ ಸಂದರ್ಭದಲ್ಲಿ ಅನಾರೋಗ್ಯದಿಂದ ಯಾರಿಗಾದರೂ ಆಸ್ಪತ್ರೆಗೆ ಬರಲು ಸಾಧ್ಯವಾಗದೆ  ಇದ್ದರೆ ವೈದ್ಯರುಗಳೇ ಅವರ ಮನೆಗೆ ತೆರಳಿ ಸೂಕ್ತ ಚಿಕಿತ್ಸೆ ನೀಡುವ ವ್ಯವಸ್ಥೆ ಆರಂಭಿಸಲಾಗಿದೆ ಎಂದು ಚಿಕ್ಕಮಗಳೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಅಶ್ವಥ್ ಬಾಬು ತಿಳಿಸಿದ್ದಾರೆ.

**ಧ್ವನಿ : ಡಾ. ಅಶ್ವಥ್ ಬಾಬು**

ರಾಜ್ಯ ಕರಾವಳಿ ಹಾಗೂ ದಕ್ಷಿಣ ಒಳನಾಡು ಸೇರಿದಂತೆ ಗುಜರಾತ್, ಕೊಂಕಣ, ಗೋವಾ ರಾಜ್ಯಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.  ಅಲ್ಲದೆ, ಮುಂದಿನ ನಾಲ್ಕು ದಿನಗಳಲ್ಲಿ ಕರ್ನಾಟಕದ ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಭಾರೀ ಮಳೆಯಾಗಲಿದೆ. ಅದೇ ರೀತಿ ಕೇರಳ, ತೆಲಂಗಾಣ, ಆಂಧ್ರಪ್ರದೇಶದ ಕರಾವಳಿ, ಒಡಿಶಾ, ವಿದರ್ಭ, ಚತ್ತೀಸ್‌ಗಢ ಮತ್ತು ಮಧ್ಯಪ್ರದೇಶದಲ್ಲೂ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

**<><*<><>*><>**

ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿದ್ದು, ವರುಣ ದೇವನ ಕೃಪೆಯಿಂದ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ನ್ಯಾಯಾಲಯದ ಆದೇಶ ಪಾಲನೆಯಾಗುತ್ತಿದ್ದು, ರಾಜ್ಯದ ರೈತರ ಹಿತ ರಕ್ಷಣೆಯೂ ಸಾಧ್ಯವಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇನ್ನೆರಡು ಮೂರು ದಿನಗಳಲ್ಲಿ ಕೆಆರ್ ಎಸ್ ಅಣೆಕಟ್ಟು ತುಂಬಲಿದ್ದು, ನಂತರ ಕಾಲುವೆಗಳಿಗೆ ನೀರು ಹರಿಸಲಾಗುವುದು. ಮುಂಜಾಗ್ರತಾ ಕ್ರಮವಾಗಿ ರಂಗನತಿಟ್ಟು ಸೇರಿದಂತೆ ಇತರೆಡೆ ದೋಣಿ ವಿಹಾರ ಸ್ಥಗಿತಗೊಳಿಸಿದ್ದು, ಹೊಳೆಗಳ ಅಕ್ಕಪಕ್ಕದ ಪ್ರದೇಶಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ ಎಂದರು.  ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗೆ ನ್ಯಾಯಾಲಯ ಯಾವ ಸಂದರ್ಭದಲ್ಲಿ ಬೇಕಾದರೂ ಸೂಚಿಸಬಹುದು. ಅದಕ್ಕೆ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

**<><*<><>*><>**

ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಶಿರೂರಿನಲ್ಲಿ ಸಂಭವಿಸಿದ ಗುಡ್ಡ ಕುಸಿತ ದುರಂತದ ಸ್ಥಳಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಘಟನೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆಯಲಾಗಿದೆ. ಒಂದೇ ಕುಟುಂಬದ ಐವರು ಪ್ರಾಣ ಕಳೆದುಕೊಂಡಿರುವುದು ದುರಂತ.  ಇನ್ನಷ್ಟು ದುರ್ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ.  ಈ ವಿಚಾರದ ಬಗ್ಗೆ  ರಾಜಕೀಯ ಆರೋಪ-ಪ್ರತ್ಯಾರೋಪ ಮಾಡುವ ಬದಲು ಎಲ್ಲರೂ ಒಂದಾಗಿ ನೊಂದವರ ಜೊತೆಗೆ ನಿಲ್ಲಬೇಕಿದೆ

ಎಂದರು. ನೊಂದವರಿಗೆ ಕೇಂದ್ರದಿಂದ ಯಾವ ರೀತಿಯಲ್ಲಿ ಪರಿಹಾರ ಒದಗಿಸಲು ಸಾಧ್ಯವಿದೆ ಎನ್ನುವ ಕುರಿತು ಪ್ರಧಾನ ಮಂತ್ರಿಗಳೊಂದಿಗೆ ಚರ್ಚೆ ನಡೆಸುವುದಾಗಿ ಕುಮಾರಸ್ವಾಮಿ ತಿಳಿಸಿದರು.

**<><*<><>*><>**

ಕೆಎಎಸ್ ಪದವಿ ಎಂಬುದು ಉನ್ನತ ಅಧಿಕಾರವಾಗಿದ್ದು, ಅಧಿಕಾರಿ ವರ್ಗದ ಶ್ರಮ ಜನರ ಸೇವೆಗೆ ಮೀಸಲಾಗಬೇಕೆ ವಿನಃ ಸ್ವಾರ್ಥ ಸಾಧನೆಗೆ ಅಲ್ಲ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. ಬೆಂಗಳೂರಿನ ಐಎಎಸ್ ಅಸೋಷಿಯೇಷನ್‌ನಲ್ಲಿ ಮಾತನಾಡಿದ ಅವರು, ರಾಜಕಾರಣಿಗಳ ಅಧಿಕಾರ ಐದು ವರ್ಷಕ್ಕೊಮ್ಮೆ ಬದಲಾಗುತ್ತದೆ. ಹೀಗಾಗಿ ಎಲ್ಲಾ ಕಾಲದಲ್ಲೂ ಅಧಿಕಾರಿಗಳೆ ಶಾಶ್ವತ. ಇಂದಿನ ಯುವ ಅಧಿಕಾರಿಗಳು ಸಾಧ್ಯವಾದಷ್ಟು ತಮ್ಮ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವ ಮೂಲಕ ಬದಲಾವಣೆಗೆ ನಾಂದಿ ಹಾಡಬೇಕು. ಬದಲಾವಣೆ ಎಂಬುದು ನಮ್ಮಿಂದ ಆರಂಭವಾಗಬೇಕು ಎಂದರು. ಕಂದಾಯ ಇಲಾಖೆ ಎಲ್ಲಾ ಇಲಾಖೆಗಳ ಮಾತೃ ಇಲಾಖೆ. ನಮ್ಮ ಮೇಲೆ ಸಾಕಷ್ಟು ಜವಾಬ್ದಾರಿ ಇದ್ದು, ಕಳೆದ ಒಂದು ವರ್ಷದಿಂದ ನಾವು ಸಾಕಷ್ಟು ಸಮಸ್ಯೆಗಳನ್ನು ಬಗೆಹರಿಸಿದ್ದೇವೆ. ಯುವ ಅಧಿಕಾರಿಗಳು ೨೧ನೇ ಶತಮಾನದ ನವ ತಂತ್ರಜ್ಞಾನ ಕೆಲಸಗಳಲ್ಲಿ ಅಳವಡಿಸಿಕೊಳ್ಳಬೇಕು. ಯಾವ ಪಕ್ಷ ಅಧಿಕಾರಕ್ಕೆ ಬಂದರೂ ಸಹ ಕರ್ನಾಟಕ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುವಂತೆ ಕೆಲಸ ನಿರ್ವಹಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

**<><*<><>*><>**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣವನ್ನು ಅಧಿಕಾರಿಗಳ ತಲೆಗೆ ಕಟ್ಟುವ ವ್ಯವಸ್ಥಿತ ತಂತ್ರಗಾರಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಸರಿಸುತ್ತಿದ್ದಾರೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಟೀಕಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಸಚಿವರ ತಪ್ಪಿಲ್ಲ ಎಂದ ಮೇಲೆ ಬಿ.ನಾಗೇಂದ್ರ ಅವರು ರಾಜೀನಾಮೆ ನೀಡಿದ್ದು ಯಾಕೆ ಎಂದು ಪ್ರಶ್ನಿಸಿದರು. ಬ್ರಾಂಡ್ ಬೆಂಗಳೂರು ನಿರ್ಮಾಣಕ್ಕೆ ನಗರದ ಎಲ್ಲಾ ಶಾಸಕರ ಬೆಂಬಲ ಅಗತ್ಯವಾಗಿದೆ. ನಗರದಲ್ಲಿ ಕಸ ವಿಲೇವಾರಿ ಸಮಸ್ಯೆ ಹೆಚ್ಚಾಗಿದ್ದು, ಕೂಡಲೇ ಸ್ವಚ್ಛ ಬೆಂಗಳೂರು ನಿರ್ಮಾಣಕ್ಕೆ ಕ್ರಮಕೈಗೊಳ್ಳಬೇಕೆಂದು ಒತ್ತಾಯಿಸಿದರು.

**<><*<><>*><>**

ಶಿಕ್ಷಣ ಪ್ರತಿಯೊಬ್ಬರ ಮೂಲಭೂತ ಹಕ್ಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಚಿತ್ರದುರ್ಗದ ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರ ದೀಕ್ಷಾ ರಜತ ಮಹೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ಶಿಕ್ಷಣ ಪಡೆಯುವ ಮೂಲಕ ಸಮ ಸಮಾಜದ ನಿರ್ಮಾಣಕ್ಕೆ ಮುಂದಾಗಬೇಕು. ಶೋಷಿತ ಸಮುದಾಯಗಳ ವಿಮೋಚನೆಗೆ ಹೋರಾಡಿದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಶಿಕ್ಷಣದಿಂದಲೇ ಮೇದಾವಿಯಾದರು ಎಂದು ಹೇಳಿದರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆ ರಾಜ್ಯದಲ್ಲಿ ಶೇಕಡ ೨೪ ರಷ್ಟಿದ್ದು, ಈ ಜನಸಂಖ್ಯೆಗೆ ಸಮನಾಗಿ ಅಭಿವೃದ್ಧಿ ಆಯವ್ಯಯದ ಶೇಕಡ ೨೪ ರಷ್ಟು ಹಣವನ್ನು ಈ ಸಮುದಾಯಗಳ ಏಳಿಗೆಗಾಗಿ ಮೀಸಲಿಟ್ಟಿದೆ. ಭೋವಿ ಅಭಿವೃದ್ಧಿ ನಿಗಮವನ್ನು ಭೋವಿ-ವಡ್ಡರ ಅಭಿವೃದ್ಧಿ ನಿಮಗವಾಗಿ ಮರುನಾಮಕರಣ ಮಾಡುಬೇಕು ಎನ್ನುವ ಬೇಡಿಕೆ ಇದೆ. ಈ ಬೇಡಿಕೆಯನ್ನು ಈಡೇರಿಸಲಾಗುವುದು ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**